**All India Radio: Bangalore**
**National Bulletin In Kannada**
**19.05.2026 19.35 hrs**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

ಮುಖ್ಯಾಂಶಗಳು

೧. ಭಾರತ-ನಾರ್ಡಿಕ್ ಪಾಲುದಾರಿಕೆಯನ್ನು ಸಮೃದ್ಧಿ, ನಾವೀನ್ಯತೆ ಮತ್ತು ಸುಸ್ಥಿರ ಭವಿಷ್ಯದ ಮಾದರಿಯಾಗಿಸಲು ನಾಯಕರಿಗೆ ಪ್ರಧಾನಿ ನರೇಂದ್ರ ಮೋದಿ ಕರೆ

೨. ಬೀದಿ ನಾಯಿಗಳಿಗೆ ದಯಾಮರಣಕ್ಕೆ ಸುಪ್ರೀಂ ಕೋರ್ಟ್ ಅಸ್ತು: ಸಾರ್ವಜನಿಕ ಸುರಕ್ಷತೆಗಾಗಿ ಐತಿಹಾಸಿಕ ತೀರ್ಪು

೩. ನೀಟ್ ಮರುಪರೀಕ್ಷೆ ಸಿದ್ಧತೆಗಳ ಕುರಿತು ಕೇಂದ್ರ ಸಚಿವ ಧರ್ಮೇಂದರ್ ಪ್ರಧಾನ್ ಅಧ್ಯಕ್ಷತೆಯಲ್ಲಿ ಉನ್ನತ ಮಟ್ಟದ ಸಭೆ

೪. ಮಿಲಿಟರಿ ನಿಖರತೆಯೊಂದಿಗೆ ಆಪರೇಷನ್ ಸಿಂದೂರ್ ಕಾರ್ಯಗತ - ಜನರಲ್ ಉಪೇಂದ್ರ ದ್ವಿವೇದಿ

೫. ಅಫ್ಘಾನ್ ವಿರುದ್ಧ ಕ್ರಿಕೆಟ್ ಸರಣಿಗೆ ಭಾರತ ತಂಡ ಪ್ರಕಟ; ಟೆಸ್ಟ್ ಹಾಗೂ ಏಕದಿನ ತಂಡಗಳಿಗೆ ಶುಭ್‌ಮನ್ ಗಿಲ್ ನಾಯಕ

---

ಇಂಡಿಯಾ-ನಾರ್ಡಿಕ್ ಪಾಲುದಾರಿಕೆಯನ್ನು ಸಮೃದ್ಧಿ, ನಾವೀನ್ಯತೆ ಮತ್ತು ಸುಸ್ಥಿರ ಭವಿಷ್ಯದ ಮಾದರಿಯಾಗಿಸಲು ನಾರ್ಡಿಕ್ ನಾಯಕರಿಗೆ ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. ಇಂಡಿಯಾ-ನಾರ್ಡಿಕ್ ಶೃಂಗಸಭೆಯಲ್ಲಿ ಪಾಲ್ಗೊಂಡು ನಂತರ ಜಂಟಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಭಾರತ ಮತ್ತು ನಾರ್ಡಿಕ್ ದೇಶಗಳ ನಡುವಿನ ಬದ್ಧತೆಯು ಪ್ರಜಾಪ್ರಭುತ್ವ, ಕಾನೂನು ಆಧಾರಿತ ಆಡಳಿತ ಮತ್ತು ಬಹುಪಕ್ಷೀಯತೆಯನ್ನು ಆಧರಿಸಿದ್ದು, ಇದು ನಮ್ಮನ್ನು ಸಹಜ ಪಾಲುದಾರರನ್ನಾಗಿ ಮಾಡಿದೆ. ಈ ಹಂಚಿಕೆಯ ಮೌಲ್ಯಗಳೇ ಉಭಯ ಪ್ರದೇಶಗಳ ನಡುವಿನ ಬಾಂಧವ್ಯಕ್ಕೆ ಅಡಿಪಾಯ ಎಂದರು.

ಇಂದಿನ ಸಭೆಯಲ್ಲಿ ಕಾನೂನು ಆಧಾರಿತ ಆಡಳಿತಕ್ಕೆ ಹೆಚ್ಚಿನ ಒತ್ತು ನೀಡಲಾಗಿದ್ದು, ಉಕ್ರೇನ್-ರಷ್ಯಾ ಅಥವಾ ಪಶ್ಚಿಮ ಏಷ್ಯಾದಂತಹ ಸಂಘರ್ಷಗಳು ಶೀಘ್ರವಾಗಿ ಕೊನೆಗಾಣಿಸುವ ಹಾಗೂ ಶಾಂತಿ ಸ್ಥಾಪಿಸುವ ಪ್ರಯತ್ನಗಳಿಗೆ ಎಲ್ಲಾ ನಾಯಕರು ಎಂದಿಗೂ ಬೆಂಬಲ ನೀಡುವುದಾಗಿ ತಿಳಿಸಿದರು. ಭಯೋತ್ಪಾದನೆ ವಿಷಯದಲ್ಲಿ ಯಾವುದೇ ರಾಜಿ ಇಲ್ಲ ಎಂಬುದು ನಮ್ಮೆಲ್ಲರ ಒಂದು ಸ್ಪಷ್ಟ ಮತ್ತು ಒಗ್ಗಟ್ಟಿನ ನಿಲುವಾಗಿದೆ ಎಂದು ನುಡಿದರು.

೨೦೨೫ರ ಅಕ್ಟೋಬರ್‌ನಿಂದ ಭಾರತವು ನಾರ್ವೆ, ಐಸ್‌ಲ್ಯಾಂಡ್ ಸೇರಿದಂತೆ ಇತರ ನಾರ್ಡಿಕ್ ದೇಶಗಳೊಂದಿಗೆ ಪ್ರಮುಖ ವ್ಯಾಪಾರ ಮತ್ತು ಆರ್ಥಿಕ ಒಪ್ಪಂದಗಳಿಗೆ ಸಹಿ ಹಾಕಿದೆ ಎಂದು ಪ್ರಧಾನಿ ಮಾಹಿತಿ ನೀಡಿದರು. ಭಾರತ ಮತ್ತು ನಾರ್ಡಿಕ್ ರಾಷ್ಟ್ರಗಳು ತಮ್ಮ ಸಂಬಂಧಗಳಿಗೆ ಹಸಿರು ತಂತ್ರಜ್ಞಾನ ಮತ್ತು ನಾವೀನ್ಯತಾ ಕಾರ್ಯತಂತ್ರದ ಪಾಲುದಾರಿಕೆಯ ರೂಪ ನೀಡಲು ನಿರ್ಧರಿಸಿವೆ ಎಂದರು. ಜಂಟಿ ಸುದ್ದಿಗೋಷ್ಠಿಯಲ್ಲಿ ನಾರ್ವೆ, ಸ್ವೀಡನ್, ಐಸ್ಲೆಂಡ್, ಫಿನ್‌ಲ್ಯಾಂಡ್ ಮತ್ತು ಡೆನ್ಮಾರ್ಕ್ ಪ್ರಧಾನಮಂತ್ರಿಗಳು ಪಾಲ್ಗೊಂಡಿದ್ದರು.

---

ಮೂರನೇ ಭಾರತ-ನಾರ್ಡಿಕ್ ಶೃಂಗಸಭೆ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರಿಂದು ಐಸ್‌ಲ್ಯಾಂಡ್ ಪ್ರಧಾನಿ ಕ್ರಿಸ್ಟ್ರುನ್ ಫ್ರಾಸ್ತಾಡೊಟ್ಟೀರ್, ಫಿನ್‌ಲ್ಯಾಂಡ್ ಪ್ರಧಾನಿ ಪೆಟ್ಟರಿ ಒರ್ಪೊ ಹಾಗೂ ಡೆನ್ಮಾರ್ಕ್ ಪ್ರಧಾನಿ ಮೆಟ್ ಫ್ರೆಡ್ರಿಕ್ಸನ್ ಅವರೊಂದಿಗೆ ಪ್ರತ್ಯೇಕ ದ್ವಿಪಕ್ಷೀಯ ಸಭೆಗಳನ್ನು ನಡೆಸಿದ್ದಾರೆ. ಈ ವೇಳೆ, ಆಯಾ ರಾಷ್ಟ್ರಗಳೊಂದಿಗೆ ಭಾರತ ಹೊಂದಿರುವ ದ್ವಿಪಕ್ಷೀಯ ಸಂಬಂಧಗಳನ್ನು ಮತ್ತಷ್ಟು ಬಲಪಡಿಸುವ ಕುರಿತು ಚರ್ಚೆ ನಡೆಸಲಾಗಿದೆ.

---

ಸಾರ್ವಜನಿಕರ ಜೀವ ರಕ್ಷಣೆ ಮತ್ತು ಸುರಕ್ಷತೆಯ ದೃಷ್ಟಿಯಿಂದ, ಹುಚ್ಚು ಹಿಡಿದಿರುವ, ಗುಣಪಡಿಸಲಾಗದ ಕಾಯಿಲೆಯಿಂದ ಬಳಲುತ್ತಿರುವ ಅಥವಾ ಅತ್ಯಂತ ಅಪಾಯಕಾರಿ ಎಂದು ಸಾಬೀತಾಗಿರುವ ಬೀದಿ ನಾಯಿಗಳಿಗೆ ದಯಾಮರಣ ನೀಡಲು ಸುಪ್ರೀಂ ಕೋರ್ಟ್ ಇದೇ ಮೊದಲ ಬಾರಿಗೆ ಅನುಮತಿ ನೀಡಿದೆ.

ನ್ಯಾಯಮೂರ್ತಿಗಳಾದ ವಿಕ್ರಮ್ ನಾಥ್, ಸಂದೀಪ್ ಮೆಹ್ತಾ ಮತ್ತು ಎನ್. ವಿ. ಅಂಜಾರಿಯಾ ಅವರನ್ನೊಳಗೊಂಡ ಪೀಠವು, ದೇಶಾದ್ಯಂತ ಹೆಚ್ಚುತ್ತಿರುವ ಬೀದಿ ನಾಯಿಗಳ ಹಾವಳಿಯನ್ನು ನಿಯಂತ್ರಿಸಲು ಈ ಮಹತ್ವದ ನಿರ್ದೇಶನಗಳನ್ನು ನೀಡಿದೆ. ಬೀದಿ ನಾಯಿಗಳ ಸಂಖ್ಯೆ ಆತಂಕಕಾರಿಯಾಗಿ ಹೆಚ್ಚಿರುವ ಹಾಗೂ ನಾಯಿ ಕಡಿತ ಅಥವಾ ಆಕ್ರಮಣಕಾರಿ ದಾಳಿಗಳಿಂದ ಸಾರ್ವಜನಿಕ ಸುರಕ್ಷತೆಗೆ ಪದೇ ಪದೇ ಧಕ್ಕೆ ಉಂಟಾಗುತ್ತಿರುವ ಪ್ರದೇಶಗಳಲ್ಲಿ ಸ್ಥಳೀಯ ಸಂಸ್ಥೆಗಳು ಈ ಕ್ರಮ ಕೈಗೊಳ್ಳಬಹುದು ಎಂದು ನ್ಯಾಯಾಲಯ ತಿಳಿಸಿದೆ.

ದೇಶದ ರಾಜಧಾನಿಯಲ್ಲಿ ಮಕ್ಕಳು ಸೇರಿದಂತೆ ಅನೇಕರು ನಾಯಿ ಕಡಿತಕ್ಕೆ ತುತ್ತಾದ ಬಗ್ಗೆ ಮಾಧ್ಯಮಗಳಲ್ಲಿ ಬಂದ ವರದಿಗಳನ್ನು ಆಧರಿಸಿ, ಕಳೆದ ವರ್ಷ ಜುಲೈ ೨೮ ರಂದು ಸುಪ್ರೀಂ ಕೋರ್ಟ್ ಸ್ವಯಂ ಪ್ರೇರಿತವಾಗಿ ಈ ಪ್ರಕರಣವನ್ನು ದಾಖಲಿಸಿಕೊಂಡಿತ್ತು. ಇದೇ ವೇಳೆ, ಬೀದಿ ನಾಯಿಗಳ ಸ್ಥಳಾಂತರ ಮತ್ತು ಸಂತಾನಶಕ್ತಿ ಹರಣ ಚಿಕಿತ್ಸೆಗೆ ಸಂಬಂಧಿಸಿದಂತೆ ಈ ಹಿಂದೆ ನೀಡಲಾಗಿದ್ದ ಆದೇಶವನ್ನು ಹಿಂಪಡೆಯುವಂತೆ ಕೋರಿ ಸಲ್ಲಿಸಲಾಗಿದ್ದ ಅರ್ಜಿಗಳನ್ನು ನ್ಯಾಯಾಲಯ ವಜಾಗೊಳಿಸಿದೆ.

---

ಮುಂಬರುವ ನೀಟ್ ಮರುಪರೀಕ್ಷೆಯ ಸಿದ್ಧತೆಗಳ ಕುರಿತು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಇಂದು ನವದೆಹಲಿಯಲ್ಲಿ ಉನ್ನತ ಮಟ್ಟದ ಸಭೆ ನಡೆಸಿದರು. ಪರೀಕ್ಷಾ ಪ್ರಕ್ರಿಯೆಯಲ್ಲಿ ಸಂಪೂರ್ಣ ಪಾರದರ್ಶಕತೆ ಮತ್ತು ಸಮಗ್ರತೆಯನ್ನು ಕಾಪಾಡಿಕೊಳ್ಳುವ ಅಗತ್ಯವನ್ನು ಒತ್ತಿಹೇಳಿದ ಸಚಿವರು, ಈ ಹಿಂದಿನ ಪರೀಕ್ಷಾ ಪ್ರಕ್ರಿಯೆಯಲ್ಲಿ ಗುರುತಿಸಲಾದ ಎಲ್ಲಾ ಲೋಪದೋಷಗಳನ್ನು ಸಮಗ್ರವಾಗಿ ಪರಿಹರಿಸಬೇಕು ಮತ್ತು ಅವುಗಳನ್ನು ಸಂಪೂರ್ಣವಾಗಿ ತೊಡೆದುಹಾಕಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಕಟ್ಟುನಿಟ್ಟಾದ ಭದ್ರತಾ ನಿಯಮಗಳ ಅಡಿಯಲ್ಲಿ ಮರುಪರೀಕ್ಷೆಯನ್ನು ಯಾವುದೇ ಅಡೆತಡೆಗಳಿಲ್ಲದೆ ಮತ್ತು ಸುರಕ್ಷಿತವಾಗಿ ನಡೆಸಬೇಕು ಎಂದು ಅವರು ಸೂಚಿಸಿದರು. ಪರೀಕ್ಷಾ ವ್ಯವಸ್ಥೆಗಳ ಪರಿಣಾಮಕಾರಿ ಅನುಷ್ಠಾನ ಮತ್ತು ಉಸ್ತುವಾರಿಗಾಗಿ ಎಲ್ಲಾ ರಾಜ್ಯಗಳ ಜಿಲ್ಲಾಧಿಕಾರಿಗಳು ಹಾಗೂ ಪೊಲೀಸ್ ಅಧೀಕ್ಷಕರೊಂದಿಗೆ ಸಮನ್ವಯ ಸಭೆಗಳನ್ನು ನಡೆಸುವಂತೆ ಸಭೆಯಲ್ಲಿ ಆದೇಶಿಸಲಾಯಿತು.

---

ಆಪರೇಷನ್ ಸಿಂದೂರ್ ಕಾರ್ಯಾಚರಣೆ, ಮಿಲಿಟರಿ ನಿಖರತೆ, ಮಾಹಿತಿ ನಿಯಂತ್ರಣ, ರಾಜತಾಂತ್ರಿಕ ಸಂಕೇತ ಹಾಗೂ ಆರ್ಥಿಕ ದೃಢಸಂಕಲ್ಪದ ಒಂದು ಸುಸಂಬದ್ಧ ರಾಷ್ಟ್ರೀಯ ಕ್ರಮವಾಗಿ ಮೂಡಿಬಂದಿದೆ ಎಂದು ಸೇನಾ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ ಅಭಿಪ್ರಾಯಪಟ್ಟಿದ್ದಾರೆ. ನವದೆಹಲಿಯಲ್ಲಿರುವ 'ಭೂ ಯುದ್ಧ ಅಧ್ಯಯನ ಕೇಂದ್ರ' ಹಮ್ಮಿಕೊಂಡಿದ್ದ 'ಭದ್ರತೆಯಿಂದ ಸಮೃದ್ಧಿಯತ್ತ: ರಾಷ್ಟ್ರೀಯ ಪ್ರಗತಿಗಾಗಿ ಸ್ಮಾರ್ಟ್ ಶಕ್ತಿ' ಎಂಬ ವಿಷಯದ ಕುರಿತಾದ ವಿಚಾರ ಸಂಕಿರಣವನ್ನು ಉದ್ದೇಶಿಸಿ ಅವರು ಮಾತನಾಡಿದರು. ಈ ಕಾರ್ಯಾಚರಣೆಯು ಭಯೋತ್ಪಾದಕ ಮೂಲಸೌಕರ್ಯಗಳನ್ನು ಧ್ವಂಸಗೊಳಿಸಿದೆ ಮತ್ತು ದೀರ್ಘಕಾಲದ ಕಾರ್ಯತಂತ್ರವನ್ನು ವಿಫಲಗೊಳಿಸಿದೆ ಎಂದು ಶ್ಲಾಘಿಸಿದರು.

ಜಾಗತಿಕ ವಿದ್ಯಮಾನಗಳ ಕುರಿತು ಮಾತನಾಡಿದ ಜನರಲ್ ದ್ವಿವೇದಿ, ಪ್ರಸ್ತುತ ಜಗತ್ತು ಸಂಕೀರ್ಣ ಸವಾಲುಗಳನ್ನು ಎದುರಿಸುತ್ತಿದೆ. ಸೆಮಿಕಂಡಕ್ಟರ್‌ಗಳ ಲಭ್ಯತೆಯು ಇಂದು ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರಭಾವ ಬೀರುವ ಸಾಧನವಾಗಿದ್ದು, ಹೋರ್ಮುಜ್ ಜಲಸಂಧಿಯು ಸಂಘರ್ಷದ ವಲಯವಾಗಿ ಬದಲಾಗಿದೆ ಎಂದು ಅವರು ಎಚ್ಚರಿಸಿದರು. ವಿಶ್ವದ ಒಟ್ಟು ರಕ್ಷಣಾ ವೆಚ್ಚವು ೨.೭ ಟ್ರಿಲಿಯನ್ ಡಾಲರ್‌ಗಳನ್ನು ದಾಟಿದ್ದು, ಇದು ವಿಶ್ವಸಂಸ್ಥೆಯ ಸುಸ್ಥಿರ ಅಭಿವೃದ್ಧಿ ಗುರಿಗಳ ಒಟ್ಟು ಬಜೆಟ್‌ಗಿಂತಲೂ ಹೆಚ್ಚಾಗಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

---

ಮುಂದಿನ ಐದು ವರ್ಷಗಳಲ್ಲಿ ಛತ್ತೀಸ್‌ಗಢದ ಬಸ್ತಾರ್ ವಲಯವು ದೇಶದ ಅತ್ಯಂತ ಅಭಿವೃದ್ಧಿ ಹೊಂದಿದ ಬುಡಕಟ್ಟು ಪ್ರದೇಶವಾಗಿ ಹೊರಹೊಮ್ಮಲಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ತಿಳಿಸಿದ್ದಾರೆ. ಇಂದು ಚತ್ತೀಸ್‌ಗಢದ ಜಗದಲ್ಪುರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ೨೦೩೧ರ ವೇಳೆಗೆ ಇಲ್ಲಿನ ಜನರ ಆದಾಯವನ್ನು ಆರು ಪಟ್ಟು ಹೆಚ್ಚಿಸುವ ಗುರಿ ಹೊಂದಲಾಗಿದೆ ಎಂದರು.

---

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಇಂದು ಅಮೆರಿಕದ ಪರಮಾಣು ಇಂಧನ ಉದ್ಯಮದ ಉನ್ನತ ಮಟ್ಟದ ನಿಯೋಗದೊಂದಿಗೆ ನವದೆಹಲಿಯಲ್ಲಿ ಮಹತ್ವದ ಸಭೆ ನಡೆಸಿದರು. ಈ ನಿಯೋಗದಲ್ಲಿ ಅಮೆರಿಕದ ಪರಮಾಣು ಶಕ್ತಿ ಸಂಸ್ಥೆ ಹಾಗೂ ಅಮೆರಿಕಾ - ಭಾರತ ಕಾರ್ಯತಂತ್ರ ಪಾಲುದಾರಿಕೆ ವೇದಿಕೆಯ ಪ್ರತಿನಿಧಿಗಳು ಪಾಲ್ಗೊಂಡಿದ್ದರು. ಈ ಸಂದರ್ಭದಲ್ಲಿ ಸಚಿವೆ ನಿರ್ಮಲಾ ಸೀತಾರಾಮನ್, 'ಶಾಂತಿ' ಕಾಯ್ದೆಯಡಿ ತರಲಾದ ಸುಧಾರಣೆಗಳು ಭಾರತದ ಶುದ್ಧ ಇಂಧನ ಪರಿವರ್ತನೆಯನ್ನು ಹೇಗೆ ವೇಗಗೊಳಿಸಲಿವೆ ಎಂಬುದನ್ನು ವಿವರಿಸಿದರು.

---

ಉತ್ತರಾಖಂಡದ ಮಾಜಿ ಮುಖ್ಯಮಂತ್ರಿ ಹಾಗೂ ಭಾರತೀಯ ಜನತಾ ಪಕ್ಷದ ಹಿರಿಯ ನಾಯಕ ಬಿ. ಸಿ. ಖಂಡೂರಿ ಸುದೀರ್ಘ ಅನಾರೋಗ್ಯದ ನಂತರ ಇಂದು ಡೆಹ್ರಾಡೂನ್‌ನ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾಗಿದ್ದಾರೆ. ಅವರಿಗೆ ೯೧ ವರ್ಷ ವಯಸ್ಸಾಗಿತ್ತು. ಭಾರತೀಯ ಸೇನೆಯಲ್ಲಿ ಮೇಜರ್ ಜನರಲ್ ಆಗಿ ನಿವೃತ್ತರಾಗಿದ್ದ ಖಂಡೂರಿ ಅವರು, ಎರಡು ಬಾರಿ ಉತ್ತರಾಖಂಡದ ಮುಖ್ಯಮಂತ್ರಿಯಾಗಿ ರಾಜ್ಯದ ಅಭಿವೃದ್ಧಿಗೆ ಶ್ರಮಿಸಿದ್ದರು. ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ ಸಂಪುಟದಲ್ಲಿ ಕೇಂದ್ರ ಭೂಸಾರಿಗೆ ಮತ್ತು ಹೆದ್ದಾರಿ ಸಚಿವರಾಗಿಯೂ ಅವರು ಸೇವೆ ಸಲ್ಲಿಸಿದ್ದರು. ಖಂಡೂರಿ ಅವರ ನಿಧನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ಪ್ರಧಾನಿ ನರೇಂದ್ರ ಮೋದಿ, ತೀವ್ರ ಶೋಕ ವ್ಯಕ್ತಪಡಿಸಿದ್ದಾರೆ.

---

ಮೂರು ದಿನಗಳ ಅಧಿಕೃತ ಪ್ರವಾಸಕ್ಕಾಗಿ ಇಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ದಕ್ಷಿಣ ಕೊರಿಯಾ ಸಿಯೋಲ್ ತಲುಪಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಈ ಭೇಟಿ ಭಾರತ-ದಕ್ಷಿಣ ಕೊರಿಯಾ ನಡುವೆ ರಕ್ಷಣಾ ಸಹಕಾರ ಮತ್ತು ಕಾರ್ಯತಂತ್ರದ ಪಾಲುದಾರಿಕೆಯನ್ನು ಬಲಪಡಿಸುವ ಉದ್ದೇಶ ಹೊಂದಿದೆ. ಪರಸ್ಪರ ಹಿತಾಸಕ್ತಿಯ ಕ್ಷೇತ್ರಗಳಲ್ಲಿ ಸಹಕಾರವನ್ನು ಮತ್ತು ದ್ವಿಪಕ್ಷೀಯ ಸಂಬಂಧವನ್ನು ಬಲಪಡಿಸಲು ಈ ಭೇಟಿ ಅವಕಾಶ ಕಲ್ಪಿಸಿದೆ ಎಂದು ತಿಳಿಸಿದ್ದಾರೆ.

---

ವಾಯುಪಡೆ ಸಿಬ್ಬಂದಿ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಅಮರ್ ಪ್ರೀತ್ ಸಿಂಗ್ ಅವರು ದ್ವಿಪಕ್ಷೀಯ ರಕ್ಷಣಾ ಸಂಬಂಧ ಮತ್ತು ಮಿಲಿಟರಿ ಸಹಕಾರವನ್ನು ಬಲಪಡಿಸುವ ಉದ್ದೇಶದಿಂದ ಮೂರು ದಿನಗಳ ಅಧಿಕೃತ ಶ್ರೀಲಂಕಾ ಪ್ರವಾಸ ಕೈಗೊಂಡಿದ್ದಾರೆ. ತಮ್ಮ ಭೇಟಿಯ ಭಾಗವಾಗಿ ಇಂದು ಐಪಿಕೆಎಫ್ ಸ್ಮಾರಕಕ್ಕೆ ಪುಷ್ಪನಮನ ಸಲ್ಲಿಸಿ ನಂತರ ಕೊಲಂಬೊದಲ್ಲಿರುವ ಶ್ರೀಲಂಕಾ ವಾಯುಪಡೆಯ ಪ್ರಧಾನ ಕಚೇರಿಯಲ್ಲಿ ಗೌರವ ವಂದನೆ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಶ್ರೀಲಂಕಾ ವಾಯುಪಡೆ ಮುಖ್ಯಸ್ಥರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸುವುದರ ಜೊತೆಗೆ ಅಲ್ಲಿನ ರಕ್ಷಣಾ ಕಾರ್ಯದರ್ಶಿ ಮತ್ತು ಉಪರಕ್ಷಣಾ ಸಚಿವರನ್ನು ಭೇಟಿ ಮಾಡಿದರು.

---

ವಿಕಸಿತ ಭಾರತದ ಗುರಿ ಸಾಧನೆಗೆ ಸರ್ಕಾರ ಮತ್ತು ಉದ್ಯಮ ವಲಯದ ನಡುವೆ ಹೆಚ್ಚಿನ ಸಹಯೋಗದ ಅಗತ್ಯವಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಶ್ ಗೋಯಲ್ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ನಡೆದ ಇಂಡಿಯಾ ಬಿಸಿನೆಸ್ ರಿಫಾರ್ಮ್ ಶೃಂಗಸಭೆ ೨೦೨೬ ರಲ್ಲಿ ಮಾತನಾಡಿದ ಅವರು, ವ್ಯವಹಾರ ಸುಲಭತೆ ಮತ್ತು ಭಾರತದ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸಲು ಕೈಗಾರಿಕಾ ವಲಯ ಸಕ್ರಿಯವಾಗಿ ಪಾಲ್ಗೊಳ್ಳಬೇಕು, ಜಾಗತಿಕ ಅನಿಶ್ಚಿತತೆಗಳ ಸುಧಾರಣೆ ಮತ್ತು ಪೂರೈಕೆ ಸರಪಳಿ ಬಲಪಡಿಸಲು ಇದನ್ನು ಒಂದು ಅವಕಾಶವಾಗಿ ಬಳಸಿಕೊಳ್ಳಬೇಕು ಎಂದು ಕರೆ ನೀಡಿದರು.

---

ಉತ್ತರಾಖಂಡದ ಜಿಮ್ ಕಾರ್ಬೆಟ್ ರಾಷ್ಟ್ರೀಯ ಉದ್ಯಾನವನದ ಗರ್ಜಿಯಾ ವಲಯದಲ್ಲಿ ಕಾಡಾನೆಯೊಂದು ಎರಡು ಆರೋಗ್ಯವಂತ ಎರಡು ಅವಳಿ ಮರಿಗಳಿಗೆ ಜನ್ಮ ನೀಡಿದೆ ಎಂದು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಖಾತೆ ರಾಜ್ಯ ಸಚಿವ ಕೀರ್ತಿವರ್ಧನ್ ಸಿಂಗ್ ತಿಳಿಸಿದ್ದಾರೆ. ಈ ಅಪರೂಪದ ವಿದ್ಯಾಮಾನದ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಸಚಿವರು, ಆನೆಗಳಲ್ಲಿ ಅವಳಿ ಮರಿಗಳ ಜನನ ಅತ್ಯಂತ ಅಪರೂಪವಾಗಿದ್ದು, ವಿಶ್ವಾದ್ಯಂತ ಆನೆಗಳ ಗರ್ಭದಾರಣೆಯ ಶೇಕಡ ೧ ಕ್ಕಿಂತ ಕಡಿಮೆ ಪ್ರಮಾಣದಲ್ಲಿ ಇಂತಹ ಘಟನೆಗಳು ಸಂಭವಿಸುತ್ತವೆ ಎಂದು ತಿಳಿಸಿದ್ದಾರೆ.

---

ಮುಂದಿನ ತಿಂಗಳು ನಡೆಯಲಿರುವ ಅಫ್ಘಾನಿಸ್ತಾನ ವಿರುದ್ಧದ ಏಕೈಕ ಟೆಸ್ಟ್ ಹಾಗೂ ಏಕದಿನ ಸರಣಿಗೆ ಭಾರತ ತಂಡವನ್ನು ಘೋಷಿಸಲಾಗಿದೆ. ಎರಡೂ ತಂಡಗಳನ್ನು ಶುಭಮನ್ ಗಿಲ್ ಮುನ್ನಡೆಸಲಿದ್ದಾರೆ. ಟೆಸ್ಟ್ ತಂಡದ ಉಪನಾಯಕತ್ವದಿಂದ ರಿಷಬ್ ಪಂತ್ ಅವರನ್ನು ಕೈಬಿಟ್ಟು, ಕೆ. ಎಲ್. ರಾಹುಲ್ ಅವರಿಗೆ ವಹಿಸಲಾಗಿದೆ. ಏಕದಿನ ತಂಡಕ್ಕೆ ಶ್ರೇಯಸ್ ಅಯ್ಯರ್ ಉಪನಾಯಕನಾಗಿ ನೇಮಕಗೊಂಡಿದ್ದಾರೆ. ಜಸ್‌ಪ್ರೀತ್ ಬುಮ್ರಾ ಮತ್ತು ರವೀಂದ್ರ ಜಡೇಜಾ ಅವರಿಗೆ ವಿಶ್ರಾಂತಿ ನೀಡಲಾಗಿದ್ದು, ಮಾನವ್ ಸುತಾರ್ ಮತ್ತು ಗುರ್ನೂರ್ ಬ್ರಾರ್ ಟೆಸ್ಟ್ ತಂಡಕ್ಕೆ ಹೊಸದಾಗಿ ಸೇರ್ಪಡೆಯಾಗಿದ್ದಾರೆ. ಜೂನ್ ೬ರಿಂದ ಮುಲ್ಲಾನ್‌ಪುರದಲ್ಲಿ ಟೆಸ್ಟ್ ಪಂದ್ಯ ಹಾಗೂ ಜೂನ್ ೧೪ರಿಂದ ಧರ್ಮಶಾಲಾ, ಲಖನೌ ಮತ್ತು ಚೆನ್ನೈನಲ್ಲಿ ಏಕದಿನ ಸರಣಿ ಪಂದ್ಯಗಳು ನಡೆಯಲಿವೆ.

___________ಮುಕ್ತಾಯ__________